ಕರ್ನಾಟಕ ಸರ್ಕಾರ

ಸಂಖ್ಯೆ: ಪಿಯುಇ/ಶೈಶಾ/ಪ.ಪು./2014-15

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರಂ 18ನೇ ಕ್ರಾಸ್,
ಸಂಪಿಗೆ ರಸ್ತೆ, ಬೆಂಗಳೂರು-12.
ದಿನಾಂಕ 04-01-2015.

**ಪತ್ರಿಕಾ ಪ್ರಕಟಣೆ**

ಪದವಿ ಪೂರ್ವ ಶಿಕ್ಷಣ ಇಲಾಖೆಯು ಪಿ.ಸಿ.ಎಂ.ಬಿ. ವಿಷಯಗಳಲ್ಲಿ ಎನ್.ಸಿ.ಇ.ಆರ್.ಟಿ ಪಠ್ಯಪುಸ್ತಕಗಳನ್ನು ಅಧಿಕೃತ ಪಠ್ಯಪುಸ್ತಕಗಳೆಂದು ಅಳವಡಿಸಿಕೊಂಡಿದೆ. ರಾಷ್ಟ್ರ ಮಟ್ಟದಲ್ಲಿ ನಡೆಯುವ ಸ್ಪರ್ಧಾತ್ಮಕ ಪರೀಕ್ಷೆಗಳು ಮತ್ತು ರಾಜ್ಯದ ಸಿ.ಇ.ಟಿ. ಪರೀಕ್ಷೆಯು ಎನ್.ಸಿ.ಇ.ಆರ್.ಟಿ.ಯ ಪೂರ್ಣ ಪಠ್ಯಪುಸ್ತಕಗಳ ವಿಷಯ ವ್ಯಾಪ್ತಿಯನ್ನು ಹೊಂದಿರುತ್ತದೆ. ಸದರಿ ಪರೀಕ್ಷೆಗಳನ್ನು ಆತ್ಮವಿಶ್ವಾಸದಿಂದ ಎದುರಿಸಲು ವಿದ್ಯಾರ್ಥಿಗಳನ್ನು ಮಾನಸಿಕವಾಗಿ ಸಿದ್ಧಪಡಿಸಬೇಕಾಗುವುದರಿಂದ ಮತ್ತು ವಿದ್ಯಾರ್ಥಿಗಳ ಹಿತದೃಷ್ಠಿಯಿಂದ ಪೂರ್ಣ ಪಠ್ಯಕ್ಕೆ ಸಿದ್ಧತೆಯನ್ನು ಪೂರ್ವ ಸಿದ್ಧತಾ ಪರೀಕ್ಷೆಯ ಹಂತದಿಂದಲೇ ಮಾಡಿಕೊಳ್ಳಲು ಸೂಚಿಸಲಾಗಿದೆ. ಇದರಿಂದ ವಿದ್ಯಾರ್ಥಿ ಸಮೂಹಕ್ಕೆ ವಾರ್ಷಿಕ ಪರೀಕ್ಷೆ ಎದುರಿಸಲು ಯಾವುದೇ ರೀತಿಯಲ್ಲೂ ತೊಂದರೆಯಾಗುವುದಿಲ್ಲ ಹಾಗೂ ಪಠ್ಯವಿಷಯವನ್ನು ಬೋಧನೆಯಿಂದ ಕೈಬಿಟ್ಟಿರುವುದಿಲ್ಲವೆಂದು ಈ ಮೂಲಕ ಸ್ಪಷ್ಟೀಕರಣ ನೀಡಿದೆ. ಪದವಿ ಪೂರ್ವ ಶಿಕ್ಷಣ ಇಲಾಖೆಯು ಸದಾ ವಿದ್ಯಾರ್ಥಿಗಳ ಹಿತಾಶಕ್ತಿ ಹಾಗೂ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿದ್ದು ವಿದ್ಯಾರ್ಥಿಗಳು, ಪಾಲಕರು ಹಾಗೂ ಪೋಷಕರು ಯಾವುದೇ ಆತಂಕ ಪಡುವ ಅವಶ್ಯಕತೆ ಇರುವುದಿಲ್ಲ.

Sd/-

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ